ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 8–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| **1.** | ಸಂಸ್ಥಾಪನಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ:<br>ಉದ್ಘಾಟನೆ:<br>ಕೃಷ್ಣ ಭೈರೇಗೌಡ,<br>ಕೃಷಿ ಖಾತೆ ರಾಜ್ಯ ಸಚಿವರು.<br>ಮುಖ್ಯ ಅತಿಥಿಗಳು:<br>ಎ.ಎಸ್. ಕಿರಣ್‌ಕುಮಾರ್,<br>ಅಧ್ಯಕ್ಷರು,<br>ಭಾರತೀಯ ಬಾಹ್ಯಕಾಶ ಸಂಶೋಧನಾ ಸಂಸ್ಥೆ<br>ಸೂಚನೆ: ಸಮಾರಂಭಕ್ಕೆ ತೆರೆಳಲು ಬೆಳಿಗ್ಗೆ 9–45 ಗಂಟೆಗೆ ಬೆಂಗಳೂರು ಪ್ರೆಸ್ ಕ್ಲಬ್ ಆವರಣದಿಂದ ವಾಹನ ವ್ಯವಸ್ಥೆ ಮಾಡಲಾಗಿದೆ.<br>ಸಂಪರ್ಕ: ಡಾ. ಎಲ್. ರಾಮಕೃಷ್ಣ ರಾವ್,<br>ಮೊ. 9986663132 | **09–10–2015**<br>ಶುಕ್ರವಾರ<br>ಬೆಳಿಗ್ಗೆ<br>10–30 ಗಂಟೆಗೆ | ಕುವೆಂಪು ಸಭಾಂಗಣ,<br>ಜಿ.ಕೆ.ವಿ.ಕೆ.<br>ಬೆಂಗಳೂರು. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಚಿತ್ರನಗರಿಗೆ ಭೂಮಿ : ಅಭಿನಂದನೆ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಇಮ್ಮಾವು ಗ್ರಾಮದಲ್ಲಿನ 110.08 ಎಕರೆ ಜಮೀನನ್ನು ಚಿತ್ರನಗರಿ ನಿರ್ಮಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಮಂಜೂರು ಮಾಡಲು ರಾಜ್ಯ ಸಚಿವ ಸಂಪುಟ ಸಮ್ಮತಿಸಿರುವುದಕ್ಕೆ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ಮುಖ್ಯಮಂತ್ರಿ ಮತ್ತು ವಾರ್ತಾ ಸಚಿವರನ್ನು ಅಭಿನಂದಿಸಿದ್ದಾರೆ.

ಸಾಂಸ್ಕೃತಿಕ ರಾಜಧಾನಿಯಾದ ಮೈಸೂರಿನಲ್ಲಿ ಚಿತ್ರನಗರಿ ನಿರ್ಮಿಸಲು ರಾಜ್ಯ ಸರ್ಕಾರ ಭೂಮಿ ಮಂಜೂರು ಮಾಡುವ ಮೂಲಕ ಹಾದಿ ಸುಗಮಗೊಳಿಸಿದೆ. ಇದರಿಂದ ಪ್ರವಾಸೋದ್ಯಮ ಹಾಗೂ ಸಾಂಸ್ಕೃತಿಕವಾಗಿ ಮೈಸೂರು ಇನ್ನಷ್ಟು ಅಭಿವೃದ್ಧಿ ಹೊಂದಲು ಕಾರಣಕರ್ತರಾದ ಮುಖ್ಯಮಂತ್ರಿಗಳು ಹಾಗೂ ವಾರ್ತಾ ಸಚಿವರ ಈ ಕಾರ್ಯ ಶ್ಲಾಘನೀಯವೆಂದು ಎಸ್.ವಿ. ರಾಜೇಂದ್ರ ಸಿಂಗ್ ಬಾಬು ಅವರು ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:
## “ಇಂಗಳೆ ಮಾರ್ಗ” ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಅಕ್ಟೋಬರ್ 10 ರ ಶನಿವಾರದಂದು ಬೆಳ್ಳಿ ಸಿನಿಮಾ “ ಇಂಗಳೆ ಮಾರ್ಗ ” ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ವಿಶಾಲ್ ರಾಜ್ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಅಕ್ಟೋಬರ್ 10 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಬೆಂಗಳೂರು ಪ್ರೆಸ್ ಕ್ಲಬ್‌ನ ಕಾರ್ಯದರ್ಶಿ ಎಸ್. ಶಿವಪ್ರಕಾಶ್, ಚಲನಚಿತ್ರ ನಿರ್ಮಾಪಕ ಘನಶ್ಯಾಮ ಭಾಂಡಗೆ ಹಾಗೂ ಚಲನಚಿತ್ರ ನಟ ಸುಚೇಂದ್ರ ಪ್ರಸಾದ್ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## <u>ಕಣ್ಣಿನ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಿಸಿ –</u>

<u>– ಆತುಲ್‌ಕುಮಾರ್ ತಿವಾರಿ</u>

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಕೇಂದ್ರ, ರಾಜ್ಯ ಸರ್ಕಾರ ಮತ್ತು ಇತರೆ ಸಂಘ ಸಂಸ್ಥೆಗಳು ಕುರುಡುತನಕ್ಕೆ ಅಂತ್ಯವಾಡಲು ಬಹಳ ಶ್ರಮಪಡುತ್ತಿವೆ. ಆದುದರಿಂದ ಸಾರ್ವಜನಿಕರು ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳುವುದು ಬಹಳ ಅಗತ್ಯ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಆತುಲ್‌ಕುಮಾರ್ ತಿವಾರಿ ಅವರು ತಿಳಿಸಿದ್ದಾರೆ.

ಇಂದು ನಗರದ ಪ್ರೆಸ್ ಕ್ಲಬ್‌ನಲ್ಲಿ ನಡೆದ 16ನೇ ಜಾಗತಿಕ ದೃಷ್ಟಿ ದಿನದಂದು ಅವರು ಮಾತನಾಡುತ್ತಾ ಕಣ್ಣುಗಳನ್ನು ಕಳೆದುಕೊಂಡರೆ ಜೀವನವೇ ಇಲ್ಲ ಎಂದು ಭಾಸವಾಗುತ್ತದೆ. ಆದುದರಿಂದ ನಾವುಗಳು ಕಣ್ಣುಗಳ ಬಗ್ಗೆ ಹೆಚ್ಚಿನ ಕಾಳಜಿವಹಿಸುವುದು ಮತ್ತು ಗ್ರಾಮೀಣ ಹಾಗೂ ನಗರ ಪ್ರದೇಶದ ಜನತೆಯಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಬೇಕೆಂದು ಪ್ರಧಾನ ಕಾರ್ಯದರ್ಶಿ ಅವರು ಕರೆ ನೀಡಿದರು.

ದೃಷ್ಟಿಹೀನತೆಗೆ ಚಿಕಿತ್ಸೆ ನೀಡುವುದಕ್ಕಿಂತ ದೃಷ್ಟಿಹೀನತೆ ಆಗದಂತೆ ನೋಡಿಕೊಳ್ಳುವುದು ಬಹಳ ಮುಖ್ಯ. ಮಕ್ಕಳನ್ನು ಮತ್ತು ವೃದ್ಧರನ್ನು ಸಮಯಕ್ಕೆ ಸರಿಯಾಗಿ ಅಥವಾ ಕಾಲಕಾಲಕ್ಕೆ ಸರಿಯಾಗಿ ಕಣ್ಣಿನ ಪರೀಕ್ಷೆ ಮಾಡಿಸುವುದರಿಂದ ಅಂಧತ್ವ ನಿವಾರಣೆ ಮಾಡಬಹುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತ ಪಿ.ಎಸ್. ವಸ್ತ್ರದ್ ಅವರು ಅಭಿಪ್ರಾಯಪಟ್ಟರು.

ಸಾರ್ವಜನಿಕರು ಕಡ್ಡಾಯವಾಗಿ ಕಣ್ಣನ್ನು ದಾನ ಮಾಡುವುದರಿಂದ ನನ್ನಂತಹ ಆನೇಕ ವ್ಯಕ್ತಿಗಳಿಗೆ ಕಣ್ಣಿನ ಭಾಗ್ಯ ಬರುತ್ತದೆ. ಆದುದರಿಂದ ಕಣ್ಣಿನ ದಾನ ಮಾಡಬೇಕು ಎಂದು ಭಾರತದ ಅಂಧತ್ವ ಕ್ರಿಕೆಟ್ ತಂಡದ ನಾಯಕ ಶೇಖರ್ ನಾಯಕ್ ತಮ್ಮ ಮನದಾಳದ ಮಾತನ್ನು ಸಭೆಯಲ್ಲಿ ಹಂಚಿಕೊಂಡರು.

ಈ ಕಾರ್ಯಕ್ರಮದಲ್ಲಿ ಮ್ಯಾನೇಜಿಂಗ್ ಟ್ರಸ್ಟಿನ ಡಾ. ಸಾರಾ ವರ್ಗೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ಅಧಿಕಾರಿಗಳು ಸೇರಿದಂತೆ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಪಲ್ಲವಿ:ವಿಜಯಾನಂದ:ಜಿಪಿಆರ್.

## ಹಿಂದುಳಿದ ವರ್ಗಗಳ ಆಯೋಗದಿಂದ ವಿಚಾರಣೆ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ವಿವಿಧ ಜಾತಿ ಜನಾಂಗಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಹೊಸದಾಗಿ ಸೇರಿಸಲು, ಪ್ರವರ್ಗ ಬದಲಾವಣೇಗೆ ಪರ್ಯಾಯ ಪದ ಸೇರ್ಪಡೆಗೆ ಮತ್ತು ಕಾಗುಣಿತ ದೋಷ ತಿದ್ದುಪಡಿಗೆ ಸಂಬಂಧಿಸಿದಂತೆ affidavit ಮೂಲಕ ಸ್ವೀಕರಿಸಿರುವ/ಸ್ವೀಕರಿಸುವ ಮನವಿಗಳ ಬಗ್ಗೆ ಕಾರವಾರದಲ್ಲಿ ಅಕ್ಟೋಬರ್ 15 ರಂದು, ಉಡುಪಿಯಲ್ಲಿ ಅಕ್ಟೋಬರ್ 16 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ಟೋಬರ್ 17 ರಂದು ಆಯಾ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬೆಳಿಗ್ಗೆ 11–00 ಗಂಟೆಗೆ ಬಹಿರಂಗ ವಿಚಾರಣೆಯನ್ನು ನಡೆಸಲಾಗುವುದು.

ವಿಚಾರಣೆಗೆ ಸಂಬಂಧಿಸಿದಂತೆ ಆಯೋಗದ ವೆಬ್‌ಸೈಟ್ ವಿಳಾಸ www.karnataka.gov.in./kscbc ಅಡಿ Commission questionnaire click ಮಾಡಿ ಪ್ರಶ್ನಾವಳಿಯನ್ನು ಪಡೆದು ಮನವಿದಾರರು ತಮ್ಮ ಮನವಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಭರ್ತಿಮಾಡಿ affidavit ಮಾಡಿಸಿ ಹತ್ತು ಪ್ರತಿಗಳನ್ನು ಸಿದ್ಧಪಡಿಸಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕಾರವಾರ, ಉಡುಪಿ ಮತ್ತು ದಕ್ಷಿಣ ಕನ್ನಡ ಇವರಿಗೆ ಸಲ್ಲಿಸಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್.

## ರಾಜ್ಯ ಮಟ್ಟದ ಪರಿಶೀಲನಾ ಸಮಿತಿ ಸಭೆ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, ನವದೆಹಲಿ ಇವರು ಅಕ್ಟೋಬರ್ 13 ರಿಂದ ಅಕ್ಟೋಬರ್ 18 ರವರೆಗೆ ರಾಜ್ಯಕ್ಕೆ ಭೇಟಿ ನೀಡಲಿದ್ದು, ಭೇಟಿಯ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳು, ಸಿಂಡಿಕೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಹಾಗೂ ವಿಜಯಾ ಬ್ಯಾಂಕ್‌ನ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಶೀಲನೆ ನಡೆಸಲಿದೆ.

ಈ ಭೇಟಿ ಸಂದರ್ಭದಲ್ಲಿ ಆಯೋಗವು ಅಕ್ಟೋಬರ್ 15 ರಂದು ಪೂರ್ವಾಹ್ನ 11–00 ರಿಂದ 1–00 ಗಂಟೆವರೆಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪರಿಶಿಷ್ಟ ಜಾತಿಗೆ ಸೇರಿರುವ ಹಾಲಿ ಹಾಗೂ ಮಾಜಿ ಸಂಸದರು ಹಾಗೂ ಶಾಸಕರನ್ನು ಭೇಟಿಮಾಡಿ, ಚರ್ಚಿಸಲಿದ್ದು, ಹಾಗೂ ಅದೇ ರೀತಿ ಆಯೋಗವು ಪರಿಶಿಷ್ಟ ಜಾತಿ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರನ್ನು ಸಹ ಮಧ್ಯಾಹ್ನ 2–00 ಗಂಟೆಯಿಂದ 4–00 ಗಂಟೆವರೆಗೆ ಭೇಟಿಮಾಡಿ, ಚರ್ಚಿಸಲಿರುವರು.

ಆಯೋಗದೊಂದಿಗೆ ಭೇಟಿಮಾಡಿ ಚರ್ಚಿಸಲು ಇಚ್ಛಿಸುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರು ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ, ಹೆಸರುಗಳನ್ನು ನೋಂದಾಯಿಸಬಹುದು. (ದೂರವಾಣಿ ಸಂಖ್ಯೆ 080-22252623)

ಪಲ್ಲವಿ::ಬಾಬು:ಜಿಪಿಆರ್.

## ಹೊರರಾಜ್ಯ ವಿದ್ಯಾರ್ಥಿಗಳಿಗೆ
## ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಅಕ್ಟೋಬರ್ 11 ರಂದು ಮಧ್ಯಾಹ್ನ 12-30 ಗಂಟೆಗೆ ಮಹಾರಾಷ್ಟ್ರದ ಸಾಂಗಾಲಿ ಜಿಲ್ಲೆಯ ಜತ್ರದ ಕೆ.ಎಂ. ಹೈಸ್ಕೂಲ್ ಆವರಣದಲ್ಲಿ ಹೊರರಾಜ್ಯ ಮಹಾರಾಷ್ಟ್ರ ವಿದ್ಯಾರ್ಥಿಗಳಿಗೆ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಏರ್ಪಡಿಸಿದೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಎಲ್. ಹನುಮಂತಯ್ಯ ಸಮಾರಂಭವನ್ನು ಉದ್ಘಾಟಿಸುವರು. ಜತ್ತ ವಿಧಾನಸಭಾ ಕ್ಷೇತ್ರದ ಶಾಸಕ ವಿಲಾಸ್ ರಾವ್ ಜಗತಾಪ ಅವರು ಅಧ್ಯಕ್ಷತೆ ವಹಿಸುವರು.

ಪಲ್ಲವಿ::ಬಾಬು:ಜಿಪಿಆರ್.

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)

ಪೌರಾಡಳಿತ, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಮತ್ತು ವಕ್ಫ್ ಸಚಿವ ಡಾ ಖಮರುಲ್ ಇಸ್ಲಾಂ ಅವರು ಅಕ್ಟೋಬರ್ 12 ರಂದು ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ಸಂಜೆ ನಗರಕ್ಕೆ ಹಿಂತಿರುಗಲಿದ್ದಾರೆ.

ಪಲ್ಲವಿ::ಬಾಬು:ಜಿಪಿಆರ್.

# ಕಬ್ಬನ್ ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:11–10–2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಮಂಜಣ್ಣ ಮತ್ತು ತಂಡ (ತುಮಕೂರು)ರವರಿಂದ ಸುಗಮ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಕೃಷ್ಣಪ್ಪ ಮತ್ತು ತಂಡ (ಸೋಮೇನಹಳ್ಳಿ)ರವರಿಂದ ಸುಗಮಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಮತ್ತು ನೃತ್ಯಾಂತರ್ ಸ್ಕೂಲ್ ಆಫ್ ಪರ್‌ಫಾರ್ಮಿಂಗ್ ಆರ್ಟ್‌ರವರ ಸಹಯೋಗದೊಂದಿಗೆ ಅಂಕಿತ ಸಾಹು ಮತ್ತು ಗುರು.ಚಂದ್ರಿಕ ಬಿ ಮಹಾಪಾತ್ರರವರಿಂದ ಒಡಿಸ್ಸಿ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ನಾಟ್ಯ ನಿನಾದ ನೃತ್ಯಾಲಯರವರ ವತಿಯಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಡಾ. ಬಿ.ಎ. ಅನ್ನದಾನೇಶ್, ಸಾಹಿತಿಗಳು, ಕನ್ನಡ ಪ್ರಾಧ್ಯಾಪಕರು, ಮಹಾರಾಣಿ ಲಕ್ಷ್ಮೀ ಅಮ್ಮಣ್ಣಿ ಕಾಲೇಜು, ಬೆಂಗಳೂರು ಇವರಿಂದ "ಬಿ.ಎಂ. ಶ್ರೀಕಂಠಯ್ಯನವರ ನಾಟಕಗಳ ವಿಶ್ಲೇಷಣೆ" ಬಗ್ಗೆ ಉಪನ್ಯಾಸ ಕಾರ್ಯಕ್ರಮವನ್ನು ಮತ್ತು ಕೆಂಪೇಗೌಡ ಪ್ರಶಸ್ತಿ ವಿಜೇತೆ ದಿಯಾ ಉದಯ್‌ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ದಿನಾಂಕ:10-10-2015ರಂದು(ಶನಿವಾರ) ಸಂಜೆ 6.30 ಗಂಟೆಯಿಂದ ರಾತ್ರಿ 7.30ರವರೆಗೆ ಮತ್ತು ದಿನಾಂಕ:11-10-2015ರಂದು (ಭಾನುವಾರ)ಬೆಳಿಗ್ಗೆ 10.00 ಗಂಟೆಯಿಂದ ಬೆಳಿಗ್ಗೆ 10.45 ಗಂಟೆಯವರೆಗೆ ಮತ್ತು ಸಂಜೆ 6.30 ಗಂಟೆಯಿಂದ ರಾತ್ರಿ 7.30ರವರೆಗೆ ಹೆಡ್ ಸ್ಟಾರ್ಟ್ ಎಜುಕೇಷನಲ್ ಅಕಾಡೆಮಿಯ 6ನೇ ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಂದ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (BMTC) ಸಹಯೋಗದಡಿ "ಪ್ಲೇ ಇನ್ ಬಿಎಂಟಿಸಿ ಬಸ್ " ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

### II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಸ್ಥಳೀಯ ಆರೋಗ್ಯ ಪರಂಪರೆಗಳ ಪುನರುಜ್ಜಾನ ಪ್ರತಿಷ್ಠಾನ, ಯಲಹಂಕ (Foundation For Revitilisation of Local Health Tradition - FRLHT) ಟ್ರಾನ್ಸ್ ಡಿಸಿಪ್ಲೀನರಿ ಯೂನಿವರ್ಸಿಟಿರವರ ವತಿಯಿಂದ ಔಷಧೀಯ ಗಿಡಗಳ ಪ್ರಾತ್ಯಕ್ಷತೆ ಮತ್ತು ಮಾರಾಟ ಮತ್ತು ಸದರಿ ಸಂಸ್ಥೆಯ ವಿವಿಧ ಪಬ್ಲಿಕೇಷನ್ ಮತ್ತು ಆಸ್ಪತ್ರೆ ಸೇವೆಗಳ ಕುರಿತು ಸಾಮಾಗ್ರಿಗಳ ಪ್ರದರ್ಶನ
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಆಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.

ಪಲ್ಲವಿ/ಬಾಬು/ಕೆಎಂ

# ಸಹಕಾರಿ ಸಂಸ್ಥೆಗಳ ಮೂಲಕ ಗ್ರಾಮೀಣ ಭಾಗದಲ್ಲಿ ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪನೆ

**ಬೆಂಗಳೂರು, ಅಕ್ಟೋಬರ್ 8 (ಕರ್ನಾಟಕ ವಾರ್ತೆ)**

ರಾಜ್ಯದ ಸಹಕಾರಿ ಸಂಸ್ಥೆಗಳ ಮೂಲಕ ಗ್ರಾಮೀಣ ಭಾಗದಲ್ಲಿ ಶುದ್ದ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸುವ ಬಗ್ಗೆ ದಿನಾಂಕ 06/10/2015 ರಂದು ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉಪಸ್ಥಿತಿಯಲ್ಲಿ, ರಾಜ್ಯಮಟ್ಟದ ಸಹಕಾರಿ ಮಹಾಮಂಡಳಗಳು, ಡಿ.ಸಿ.ಸಿ. ಬ್ಯಾಂಕು ಹಾಗೂ ಹಾಲು ಉತ್ಪಾದಕರ ಒಕ್ಕೂಟಗಳ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರುಗಳು, ಹಿರಿಯ ಸಹಕಾರಿಗಳು, ಸಹಕಾರ ಇಲಾಖೆಯ ಅಪರಮುಖ್ಯ ಕಾರ್ಯದರ್ಶಿ, ನಿಬಂಧಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ನಿರ್ದೇಶಕರು–ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಹಾಗೂ ಸಹಕಾರ ಇಲಾಖೆಯ ಅಧಿಕಾರಿಗಳ ಸಮಕ್ಷಮದಲ್ಲಿ ಚರ್ಚೆ ನಡೆಸಿ, ಸಹಕಾರ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಸಂಸ್ಥೆಗಳಿಗೆ ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಕುರಿತು ಈ ಕೆಳಗಿನಂತೆ ತೀರ್ಮಾನಗಳನ್ನು ತೆಗೆದುಕೊಳ್ಳಲಾಯಿತು.

- ರಾಜ್ಯ ಸರ್ಕಾರವು 3 ವರ್ಷಗಳಲ್ಲಿ ರಾಜ್ಯದ ಗ್ರಾಮೀಣ ಭಾಗದಲ್ಲಿ 7 ಸಾವಿರ ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲು ಯೋಜನೆ ರೂಪಿಸಿದ್ದು, ಆ ನಿಟ್ಟಿನಲ್ಲಿ ರಾಜ್ಯದ ವಿವಿಧ ಸಹಕಾರ ಸಂಸ್ಥೆಗಳ ಸಹಯೋಗದಲ್ಲಿ ನಿಗದಿತ ಗುರಿಯನ್ನು ತಲುಪುವ ಬಗ್ಗೆ ಚರ್ಚಿಸಲಾಯಿತು.
- ಸಹಕಾರ ಮತ್ತು ಸಕ್ಕರೆ ಸಚಿವರು ಮಾತನಾಡಿ, ಗ್ರಾಮೀಣ ಭಾಗದ ಜನರು ಶುದ್ದ ಕುಡಿಯುವ ನೀರಿನ ಸೇವನೆ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಬೇಕು. ಆ ನಿಟ್ಟಿನಲ್ಲಿ ಸಹಕಾರ ಇಲಾಖೆ ಮತ್ತು ಸಹಕಾರಿಗಳ ಸಹಕಾರ ಬಹಳ ಅತ್ಯಗತ್ಯ. ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಹಾಲು ಉತ್ಪಾದಕರ ಸಹಕಾರ ಸಂಘಗಳು, ಪತ್ತಿನ ಸಹಕಾರ ಸಂಘಗಳು, ಮೊದಲಾದ ಸಾವಿರಾರು ಸಂಖ್ಯೆಯ ಸಹಕಾರ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿದ್ದು, ಅವುಗಳ ಪೈಕಿ ಲಾಭದಲ್ಲಿರುವ ಹಾಗೂ ಸ್ವಂತ ಜಾಗ ಹೊಂದಿರುವಂತಹ ಸಂಸ್ಥೆಯವರು ಮುಂದೆ ಬಂದು, ಸರ್ಕಾರ ನೀಡುತ್ತಿರುವ ಸಹಾಯಧನವನ್ನು ಬಳಸಿಕೊಂಡು ಯೋಜನೆ ಅನುಷ್ಠಾನಗೊಳಿಸುವಂತೆ ತಿಳಿಸಿದರು.
- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯಸಚಿವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪಿಸುವಂತಹ ಪ್ರತಿ ಘಟಕಕ್ಕೆ ರೂ. 5 ಲಕ್ಷಗಳ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ನೀಡಲಾಗುವುದು. ಈ ಉದ್ದೇಶಕ್ಕಾಗಿ ಪ್ರಸ್ತುತ ಸಾಲಿನ ಆಯವ್ಯಯದಲ್ಲಿ ರೂ. 200 ಕೋಟಿಗಳ ಅನುದಾನವನ್ನು ಒದಗಿಸಿದ್ದು, ಇಲಾಖೆ ನೀಡುವ ರೂ. 5.00 ಲಕ್ಷಗಳ ಅನುದಾನವನ್ನು ಬಳಸಿಕೊಂಡು ಸಹಕಾರ ಸಂಸ್ಥೆಗಳು ಹೆಚ್ಚಿನ ಪ್ರಮಾಣದಲ್ಲಿ ಘಟಕ ಸ್ಥಾಪಿಸಲು ಮುಂದೆ ಬರಬೇಕೆಂದು ಕೋರಿದರು.
- ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪನೆಗೆ ಬೇಕಾದ ಯಂತ್ರೋಪಕರಣ, ಕಟ್ಟಡ ನಿರ್ಮಾಣ, ನೀರಿನ ಸಂಪರ್ಕ, ವಿದ್ಯುಚ್ಛಕ್ತಿ, ಹೀಗೆ ಎಲ್ಲಾ ಸೇರಿ ಸುಮಾರು ರೂ. 8 ರಿಂದ 10 ಲಕ್ಷದವರೆಗೆ ಖರ್ಚಾಗಲಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.
- ಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಮಹಾಮಂಡಳಗಳು ಹಾಗೂ ಸಹಕಾರ ಸಂಸ್ಥೆಗಳ ಪ್ರತಿನಿಧಿಗಳು, ಸಹಕಾರಿಗಳು ಮಾತನಾಡಿ, ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಮುಖ್ಯವಾಗಿ ಬೇಕಾಗಿರುವ ನೀರಿನ ಸಂಪರ್ಕ ಮತ್ತು ಸ್ಥಳ ಒದಗಿಸುವ ಬಗ್ಗೆ ಸರ್ಕಾರ ಸಹಕಾರ ನೀಡಬೇಕು ಹಾಗು

ಇಲಾಖೆಯಿಂದ ಒದಗಿಸುವ ರೂ. 5 ಲಕ್ಷಗಳನ್ನು ಹೇಗೆ ಬಳಸಿಕೊಳ್ಳಬೇಕು, ಘಟಕ ಸ್ಥಾಪನೆಯಾದ ನಂತರದ ವರ್ಷಗಳಲ್ಲಿ ಅದರ ನಿರ್ವಹಣೆ ಮಾಡುವುದು ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ಮಾರ್ಗಸೂಚಿಯನ್ನು ಹೊರಡಿಸಬೇಕೆಂದು ವಿನಂತಿಸಿದರು.

- ಸುದೀರ್ಘ ಚರ್ಚೆಯ ನಂತರ ಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಸಹಕಾರ ಸಂಸ್ಥೆಗಳು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಉತ್ಸುಕತೆ ತೋರಿದ್ದು, ಈ ಕೆಳಗಿನಂತೆ ಘಟಕ ಸ್ಥಾಪಿಸಲು ಸಹಕಾರ ಸಂಸ್ಥೆಗಳಿಗೆ ಪ್ರಾರಂಭದಲ್ಲಿ ಅನುದಾನ ನೀಡುವ ಬಗ್ಗೆ ತೀರ್ಮಾನಿಸಲಾಯಿತು.
- 1) 21 ಡಿ.ಸಿ.ಸಿ. ಬ್ಯಾಂಕ್‌ಗಳು ಅಗತ್ಯತೆಗಳಿಗನುಗುಣವಾಗಿ ನೀರು ಮತ್ತು ಸ್ಥಳದ ವ್ಯವಸ್ಥೆ ಇರುವಂತಹ 50 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳಲ್ಲಿ ಘಟಕ ಸ್ಥಾಪಿಸಲು (21:50= 1,050)
- 2) 13 ಹಾಲು ಉತ್ಪಾದಕರ ಒಕ್ಕೂಟಗಳು, ಆಯ್ದ 50 ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಘಟಕ ಸ್ಥಾಪಿಸಲು (13:50=650)
- 3) ಸಹಕಾರ ಸಕ್ಕರೆ ಕಾರ್ಖಾನೆಗಳು, ಮೀನುಗಾರರ ಸಹಕಾರ ಸಂಘಗಳು, ಪಟ್ಟಣ ಸಹಕಾರ ಬ್ಯಾಂಕುಗಳು ತಲಾ 50 ರಂತೆ ಹಾಗೂ ಪಿಕಾರ್ಡ್ ಬ್ಯಾಂಕು, ಮಹಿಳಾ ಸಹಕಾರಿ ಸಂಘಗಳು, ಜಿಲ್ಲಾ ಸಹಕಾರಿ ಯೂನಿಯನ್‌ಗಳು ತಲಾ 25 ರಂತೆ, ಟಿಎಪಿಸಿಎಂಎಸ್‌ಗಳಲ್ಲಿ 75, ಹೀಗೆ ಸುಮಾರು 2,600 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಾರ್ಚ್ 2016 ರೊಳಗೆ ಸ್ಥಾಪಿಸಲು ತೀರ್ಮಾನಿಸಲಾಯಿತು.
- ಸದರಿ ಘಟಕಗಳನ್ನು ಸ್ಥಾಪಿಸಲು ಸಹಕಾರ ಸಂಸ್ಥೆಗಳು ನಮ್ಮಲ್ಲಿ ಇರುವ ಲಾಭಾಂಶವನ್ನು ಬಳಸಿಕೊಳ್ಳಲು ಕಾನೂನಿನ ತೊಡಕುಗಳೇನಾದರು ಇದ್ದಲ್ಲಿ, ಅದನ್ನು ಸರಿಪಡಿಸಲು ಸಹಕಾರ ಇಲಾಖೆಯು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.
- ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರತಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಸಹಕಾರ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಕಾರ್ಯಪಡೆಯನ್ನು ರಚಿಸಲು ತೀರ್ಮಾನಿಸಲಾಯಿತು.
- ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ನೀರು ಸರಬರಾಜು ಆಯುಕ್ತರು ಮತ್ತು ಸಹಕಾರ ಇಲಾಖೆಯ ಅಪರ ನಿಬಂಧಕರುಗಳನ್ನು ಈ ಯೋಜನೆಯ ಅನುಷ್ಠಾನದ ನೋಡಲ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲು ಸೂಚಿಸಲಾಯಿತು.

ಪಲ್ಲವಿ/ಕೆಪಿಪಿ/ಕೆಎಂ